18

# ಕರ್ನಾಟಕ ವಿಧಾನ ಪರಿಷತ್ತು

## ನೂರ ಮೂವತ್ತನಾಲ್ಕನೆಯ ಅಧಿವೇಶನ

## ಕಾರ್ಯಕಲಾಪಗಳ ಪಟ್ಟಿ

**ಸೋಮವಾರ, ದಿನಾಂಕ:19ನೇ ಫೆಬ್ರವರಿ, 2018**
**(ಸಮಯ: ಬೆಳಗ್ಗೆ: 11.00 ಗಂಟೆಗೆ)**

* * *

### 01. ಪ್ರಶ್ನೋತ್ತರ

ಅ) ಸದನದಲ್ಲಿ ಉತ್ತರಿಸುವ ಪ್ರಶ್ನೆಗಳು : ಐದನೆಯ ಪಟ್ಟಿ

ಆ) ಲಿಖಿತ ಮೂಲಕ ಉತ್ತರಿಸುವ ಪ್ರಶ್ನೆಗಳು : ಐದನೆಯ ಪಟ್ಟಿ

### 02. ವರದಿಗಳನ್ನೊಪ್ಪಿಸುವುದು

ಅ) **ಶ್ರೀ ಬಸವರಾಜ ರಾಯರೆಡ್ಡಿ (ಉನ್ನತ ಶಿಕ್ಷಣ ಸಚಿವರು ಹಾಗೂ ಅಧ್ಯಕ್ಷರು, ಪರಿಶೀಲನಾ ಸಮಿತಿ)** ಅವರು 2017ನೇ ಸಾಲಿನ "ಕರ್ನಾಟಕ ರಾಜ್ಯ ವಿಶ್ವವಿದ್ಯಾನಿಲಯಗಳ ವಿಧೇಯಕ"ಕ್ಕೆ ಸಂಬಂಧಪಟ್ಟಂತೆ ರಚಿಸಲಾದ ಪರಿಶೀಲನಾ ಸಮಿತಿಯ ವರದಿಯನ್ನು ಒಪ್ಪಿಸುವುದು;

ಆ) **ಶ್ರೀ ಎನ್.ಎಸ್. ಬೋಸ್‌ರಾಜು (ಅಧ್ಯಕ್ಷರು, ಹಕ್ಕುಬಾಧ್ಯತಾ ಸಮಿತಿ)** ಅವರು 2016-2017ನೇ ಸಾಲಿನ ಹಕ್ಕುಬಾಧ್ಯತಾ ಸಮಿತಿಯ 86, 87, 88 ಹಾಗೂ 89ನೇ ವರದಿಗಳನ್ನು ಒಪ್ಪಿಸುವುದು;

ಇ) **ಶ್ರೀ ರಾಮಚಂದ್ರಗೌಡ (ಸದಸ್ಯರು, ಸಾರ್ವಜನಿಕ ಉದ್ಯಮಗಳ ಸಮಿತಿ)** ಅವರು 2017-2018ನೇ ಸಾಲಿನ ಸಾರ್ವಜನಿಕ ಉದ್ಯಮಗಳ ಸಮಿತಿಯ 133ನೇ ವರದಿಯನ್ನು ಒಪ್ಪಿಸುವುದು;

### 03. ಅರ್ಜಿಗಳನ್ನೊಪ್ಪಿಸುವುದು

ಅ) **ಶ್ರೀ ಕೆ. ಪ್ರತಾಪಚಂದ್ರ ಶೆಟ್ಟಿ** ಅವರು ಲೋಕೋಪಯೋಗಿ ಇಲಾಖೆಯ ರಸ್ತೆಯ ಅಂಚಿನಲ್ಲಿರುವ ಖಾಸಗಿಯವರ ಪಟ್ಟಾ ಸ್ಥಳಗಳನ್ನು ಭೂಸ್ವಾಧೀನ ಪ್ರಕ್ರಿಯೆಗೂ ಒಳಪಡಿಸದೇ ಅಭಿವೃದ್ಧಿಗೂ ಅವಕಾಶ ನೀಡದೇ ಇರುವುದರಿಂದ ಪಟ್ಟಾ ಜಮೀನುದಾರರಿಗೆ ತೊಂದರೆಯಾಗುತ್ತಿರುವುದನ್ನು ಸರಿಪಡಿಸಿ ನ್ಯಾಯ ಒದಗಿಸುವ ಬಗ್ಗೆ ಅರ್ಜಿಯನ್ನು ಒಪ್ಪಿಸುವುದು;

.....2

ಆ) **ಶ್ರೀ ಕೋಟ ಶ್ರೀನಿವಾಸ ಪೂಜಾರಿ** ಅವರು ಮಾಣಿಲ ಗ್ರಾಮದ ಮದಕದ ಮೂಲೆಯಿಂದ ಕನ್ನಡಗುಳಿ ಕೂಟೇಲುಗೆ ಹಾದು ಹೋಗುವ ಸಾರ್ವಜನಿಕ ರಸ್ತೆಗೆ ಮದಕ ಮೂಲೆ ಎಂಬಲ್ಲಿ ಕೆ.ಎಂ. ವಿಷ್ಣು ಭಟ್ ಅವರು ಸಾರ್ವಜನಿಕ ರಸ್ತೆಗೆ ಗುಂಡಿ ತೋಡಿ, ಮಳೆ ನೀರಿನ ಚರಂಡಿಗೆ ಕಲ್ಲು ಮಣ್ಣಿನಿಂದ ಮುಚ್ಚಿ ರಸ್ತೆ ಸಂಚಾರಕ್ಕೆ ಅಡ್ಡಿಯನ್ನುಂಟು ಮಾಡಿರುವುದನ್ನು ತೆರವುಗೊಳಿಸಿ ಸುಗಮ ಸಂಚಾರಕ್ಕೆ ಅವಕಾಶ ಕಲ್ಪಿಸಿಕೊಡುವ ಬಗ್ಗೆ ಅರ್ಜಿಯನ್ನು ಒಪ್ಪಿಸುವುದು;

ಇ) **ಶ್ರೀ ಆರ್. ಚೌಡರೆಡ್ಡಿ ತೂಪಲ್ಲಿ** ಅವರು ತುಮಕೂರು ಜಿಲ್ಲೆಯ ಕುಣಿಗಲ್ ತಾಲ್ಲೂಕಿನ ಯಡಿಯೂರು ಹೋಬಳಿ, ಸಿಂಗಟಹಳ್ಳಿ ಗ್ರಾಮದ ಸರ್ವೆ ನಂ:91ರ ಜಮೀನು ಮತ್ತು ಸಾರ್ವಜನಿಕ ರಸ್ತೆಗೆ ಅಡ್ಡಲಾಗಿ ಸಾರ್ವಜನಿಕ ರಸ್ತೆಯಲ್ಲಿ ನಿರ್ಮಿಸಿರುವ ತಡೆಗೋಡೆ ಹಾಗೂ ಗೇಟ್‌ನ್ನು ತೆರವುಗೊಳಿಸುವ ಬಗ್ಗೆ ಅರ್ಜಿಯನ್ನು ಒಪ್ಪಿಸುವುದು;

## 04. ಗಮನ ಸೆಳೆಯುವ ಸೂಚನೆಗಳು

ಅ) **ಕ್ಯಾಪ್ಟನ್ ಗಣೇಶ್ ಕಾರ್ಣಿಕ್** ಅವರು, ಬಾಲ ಸೇವಿಕಾ ತರಬೇತಿ ಪಡೆದು ನರ್ಸರಿ ಶಾಲೆಗಳಲ್ಲಿ ಪೂರ್ವ ಪ್ರಾಥಮಿಕ ಶಾಲಾ ಶಿಕ್ಷಕಿಯರಾಗಿ ಸೇವೆ ಸಲ್ಲಿಸುತ್ತಿರುವವರಿಗೂ ಸಹ ಅನುದಾನಿತ ನೌಕರರಿಗೆ ನೀಡುತ್ತಿರುವಂತೆ ನಿವೃತ್ತಿ ಸೌಲಭ್ಯಗಳನ್ನು ಒದಗಿಸುವ ಬಗ್ಗೆ **ಮಾನ್ಯ ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ ಹಾಗೂ ಅಲ್ಪಸಂಖ್ಯಾತರ ಕಲ್ಯಾಣ ಹಾಗೂ ವಕ್ಫ್** ಸಚಿವರ ಗಮನ ಸೆಳೆಯುವುದು.

ಆ) **ಶ್ರೀ ಐವನ್ ಡಿ'ಸೋಜಾ** ಅವರು, ರಾಜ್ಯದಲ್ಲಿರುವ ಅಡಿಕೆ ಬೆಳೆಗಾರರ ಸಮಸ್ಯೆಗಳಿಗೆ ಹಾಗೂ ಅಡಿಕೆ ಬೆಳೆಗೆ ಆಗುವ ತೊಂದರೆಗಳಿಗೆ ಅಡಿಕೆ ಬೆಳೆಗಾರರ ಮಂಡಳಿಯನ್ನು ರಚಿಸುವ ಬಗ್ಗೆ **ಮಾನ್ಯ ಕೃಷಿ ಮಾರುಕಟ್ಟೆ ಮತ್ತು ತೋಟಗಾರಿಕೆ** ಸಚಿವರ ಗಮನ ಸೆಳೆಯುವುದು.

## 05. ನಿಯಮ 330ರ ಮೇರೆಗೆ

ಅ) **ಶ್ರೀ ಕೋಟ ಶ್ರೀನಿವಾಸ ಪೂಜಾರಿ** ಅವರು, ಕಂದಾಯ ಇಲಾಖೆಯ ಗ್ರಾಮ ಮಟ್ಟದ ಗ್ರಾಮಕರಣೀಕರ ಕಛೇರಿಯಲ್ಲಿನ ಮೂಲ ಸೌಕರ್ಯದ ಕೊರತೆ, ಸ್ವಂತ ಕಟ್ಟಡಗಳಿಲ್ಲದೆ ಇರುವುದು ಹಾಗೂ ಸಿಬ್ಬಂದಿ ಕೊರತೆಯಿಂದಾಗಿ ಗ್ರಾಮದ ಕಛೇರಿಯಲ್ಲಿ ಸಾರ್ವಜನಿಕ ಸೇವೆಯಲ್ಲಿ ವಿಳಂಬ ನೀತಿ ಸೇರಿದಂತೆ ಇಲಾಖೆಯಲ್ಲಿನ ಸಮಸ್ಯೆಗಳು ಮತ್ತು ಆಡಳಿತಾತ್ಮಕ ವಿಷಯಗಳಲ್ಲಿನ ಲೋಪದ ಬಗ್ಗೆ ಪ್ರಸ್ತಾಪಿಸುವುದು. **(ಮಾನ್ಯ ಕಂದಾಯ ಸಚಿವರು)**

ಆ) **ಶ್ರೀ ಕೆ.ಟಿ. ಶ್ರೀಕಂಠೇಗೌಡ** ಅವರು, ರಾಜ್ಯದಲ್ಲಿನ ಎಲ್ಲಾ ಮಾದರಿಯ ಖಾಸಗಿ ಶಾಲೆಗಳಲ್ಲಿ ಕನ್ನಡ ಭಾಷಾ ಬೋಧನೆಯನ್ನು ಕಡ್ಡಾಯಗೊಳಿಸಿದ್ದು, ಈ ಬಗ್ಗೆ ಖಚಿತಪಡಿಸಿಕೊಳ್ಳಲು ಸಮಿತಿಯನ್ನು ರಚಿಸುವುದು ಮತ್ತು ನಿಯಮವನ್ನು ಉಲ್ಲಂಘನೆ ಮಾಡುವ ಶಾಲೆಗಳಿಗೆ ದಂಡವನ್ನು ವಿಧಿಸುವ ಜೊತೆಗೆ ಮಾನ್ಯತೆಯನ್ನು ರದ್ದುಪಡಿಸುವಂತಹ ಕಠಿಣವಾದ ನಿಯಮಗಳನ್ನು ಜಾರಿಗೊಳಿಸುವ ಬಗ್ಗೆ ಪ್ರಸ್ತಾಪಿಸುವುದು. **(ಮಾನ್ಯ ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ ಹಾಗೂ ಅಲ್ಪಸಂಖ್ಯಾತರ ಕಲ್ಯಾಣ ಹಾಗೂ ವಕ್ಫ್ ಸಚಿವರು)**

## 06. ರಾಜ್ಯಪಾಲರ ಭಾಷಣಕ್ಕೆ ಸಂಬಂಧಿಸಿದ ವಂದನಾರ್ಪಣಾ ಪ್ರಸ್ತಾವ

"2018ನೇ ಫೆಬ್ರವರಿ, 05ರಂದು ಘನತೆವೆತ್ತ ರಾಜ್ಯಪಾಲರು ವಿಧಾನ ಮಂಡಲದ ಸದಸ್ಯರುಗಳನ್ನುದ್ದೇಶಿಸಿ ದಯಪಾಲಿಸಿದ ಭಾಷಣಕ್ಕಾಗಿ ಈ ಅಧಿವೇಶನದಲ್ಲಿ ಸೇರಿರುವ ವಿಧಾನ ಪರಿಷತ್ತಿನ ಸದಸ್ಯರಾದ ನಾವು ರಾಜ್ಯಪಾಲರಿಗೆ ಕೃತಜ್ಞತಾಪೂರ್ವಕವಾದ ವಂದನೆಗಳನ್ನು ಸಮರ್ಪಿಸಲು ಅಪ್ಪಣೆ ಕೋರುತ್ತೇವೆ" ಎಂದು ದಿನಾಂಕ:06-02-2018ರಂದು **ಶ್ರೀ ಎಸ್. ರವಿ**ರವರು ಸೂಚಿಸಿದ ಪ್ರಸ್ತಾವದ ಮೇಲಿನ ಮುಂದುವರೆದ ಚರ್ಚೆ:

(ನಾಲ್ಕನೆಯ ದಿನ)

**ಕೆ.ಆರ್. ಮಹಾಲಕ್ಷ್ಮಿ**
**ಕಾರ್ಯದರ್ಶಿ(ಪ್ರ)**

ಪ್ರತಿ ದಿನದ ವಿಧಾನ ಪರಿಷತ್ತಿನ ಕಾರ್ಯಕಲಾಪಗಳ ಪಟ್ಟಿಯನ್ನು ವೆಬ್‌ಸೈಟ್‌ನಲ್ಲಿಯೂ ಸಹ ಪಡೆದುಕೊಳ್ಳಬಹುದು.
www.kla.kar.nic.in/council.htm